# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : **1241**

**ಮಾನ್ಯ ಸದಸ್ಯರ ಹೆಸರು** : **ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)**

**ಉತ್ತರಿಸುವ ದಿನಾಂಕ** : **19-12-2024**

**ಉತ್ತರಿಸುವ ಸಚಿವರು** : **ಗೃಹ ಸಚಿವರು**

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ವರದಿಯಾಗಿರುವ ಮತ್ತು ದಾಖಲಾಗಿರುವ ಡಿಜಿಟಲ್ ಬಂಧನ (ಡಿಜಿಟಲ್ ಅರೆಸ್ಟ್) ಪ್ರಕರಣಗಳೆಷ್ಟು: ಇವುಗಳಲ್ಲಿ ಭೇದಿಸಲಾದ ಪ್ರಕರಣಗಳೆಷ್ಟು; ತನಿಖೆ ಹಂತದಲ್ಲಿರುವ ಪ್ರಕರಣಗಳೆಷ್ಟು: | ರಾಜ್ಯದಲ್ಲಿ ವರದಿ/ದಾಖಲಾಗಿರುವ ಡಿಜಿಟಲ್ ಅರೆಸ್ಟ್ ಪ್ರಕರಣಗಳ ವಿವರಗಳು ಈ ಕೆಳಕಂಡಂತಿವೆ.<br><br>ವರದಿ/ ದಾಖಲಾಗಿರುವ ಪ್ರಕರಣಗಳ ಸಂಖ್ಯೆ: **641**; ಪತ್ತೆ ಹಚ್ಚಿರುವ ಪ್ರಕರಣಗಳು: **19**; ಬಂಧಿಸಿರುವ ಆರೋಪಿಗಳ ಸಂಖ್ಯೆ: **27**; ತನಿಖೆ ಯಲ್ಲಿರುವ ಪ್ರಕರಣಗಳು: **622** |
| ಆ) | ಈ ಪ್ರಕರಣಗಳಲ್ಲಿ ಅಪರಾಧಗಳಿಗೆ ಯಾವ ಕಾನೂನಿನಡಿ ಪ್ರಕರಣ ದಾಖಲಿಸಲಾಗುತ್ತಿದೆ: ಈಗಾಗಲೇ ದಾಖಲಾಗಿರುವ ಎಷ್ಟು ಪ್ರಕರಣಗಳಲ್ಲಿ ಅಪರಾಧಿಗಳನ್ನು ಬಂಧಿಸಿ ಶಿಕ್ಷೆ ನೀಡಲಾಗಿದೆ: ಇಂತಹ ಪ್ರಕರಣಗಳಲ್ಲಿ ಮುಟ್ಟುಗೋಲು ಹಾಕಿಕೊಳ್ಳಲಾಗುವ ಹಣವನ್ನು ಯಾವ ರೀತಿ ನಿರ್ವಹಣೆ ಮತ್ತು ವಿಲೇವಾರಿ ಮಾಡಲಾಗುತ್ತಿದೆ: | ಡಿಜಿಟಲ್ ಅರೆಸ್ಟ್ ಪ್ರಕರಣಗಳಿಗೆ ಸಂಬಂಧಿಸಿದಂತೆ ಮಾಹಿತಿ ತಂತ್ರಜ್ಞಾನ ಕಾಯ್ದೆ ಹಾಗೂ ಬಿಎನ್ಎಸ್ ಕಾಯ್ದೆಯಡಿ ಪ್ರಕರಣಗಳನ್ನು ದಾಖಲಿಸಲಾಗುತ್ತಿದೆ. ಪ್ರಸ್ತುತ 641 ಪ್ರಕರಣಗಳನ್ನು ದಾಖಲಿಸಿದ್ದು, ಒಟ್ಟು 27 ಜನ ಆರೋಪಿಗಳನ್ನು ಬಂಧಿಸಿ ಮಾನ್ಯ ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿದೆ.<br><br>ಅದರಂತೆ, ಪ್ರಕರಣಗಳಲ್ಲಿ ಮುಟ್ಟುಗೋಲು ಹಾಕಿದ ಹಣವನ್ನು ಮಾನ್ಯ ನ್ಯಾಯಾಲಯದ ಆದೇಶದಂತೆ ಪಿರ್ಯದುದಾರರಿಗೆ ಹಿಂದಿರುಗಿಸಲಾಗುತ್ತದೆ. |
| ಇ) | ಆನ್‌ಲೈನ್ ಹಾಗೂ ಆಧಾರ್ ಆಧಾರಿತ ಪಾವತಿಗಳನ್ನು ಮಾಡುವಾಗ ಆಧಾರ್ ಸಂಖ್ಯೆ ಮತ್ತು ಬಯೋಮೆಟ್ರಿಕ್ ಆಧಾರಿತ ಪಾವತಿಯ ನಂತರ ಜೀವಮಾಪನ (ಬಯೊಮೆಟ್ರಿಕ್) ಆಕ್ಟಿವೇಷನ್ ರದ್ದುಪಡಿಸಲು ಗ್ರಾಹಕರಿಗೆ ಮಾಹಿತಿ ಹಾಗೂ ಬ್ಯಾಂಕುಗಳಿಗೆ, ಇತರ ಪಾವತಿ ಸಂಸ್ಥೆಗಳಿಗೆ ಸೂಕ್ತ ನಿರ್ದೇಶನ ನೀಡಲಾಗಿದೆಯೇ: ಸೈಬರ್ ಪೊಲೀಸ್ ಠಾಣೆಯಲ್ಲಿ ಈ ಅಪರಾಧ ತಡೆಯಲು ಅಗತ್ಯವಿರುವ ತಾಂತ್ರಿಕ ನುರಿತ ತರಬೇತಿದಾರರನ್ನು | "ಎಂ-ಆಧಾರ್" ಎಂಬ ಅಪ್ಲಿಕೇಷನ್ ಮೂಲಕ ಆನ್‌ಲೈನ್ ಹಾಗೂ ಆಧಾರ್ ಆಧಾರಿತ ಪಾವತಿಗಳನ್ನು ಮಾಡುವಾಗ ಆಧಾರ ಸಂಖ್ಯೆ ಮತ್ತು ಬಯೋಮೆಟ್ರಿಕ್ ಆಧಾರಿತ ಪಾವತಿಯ ನಂತರ ಜೀವಮಾಪನ (ಬಯೋಮೆಟ್ರಿಕ್) ಆಕ್ಟಿವೇಷನ್ ರದ್ದುಪಡಿಸಲು ಗ್ರಾಹಕರಲ್ಲಿ ಜಾಗೃತಿ ಮೂಡಿಸಲಾಗುತ್ತಿದ್ದು, ಡಿಜಿಟಲ್ ಅರೆಸ್ಟ್' ವಂಚನೆಯ ಪ್ರಕರಣಗಳನ್ನು ತಡೆಯಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿರುತ್ತದೆ.<br><br>1. ಡಿಜಿಟಲ್ ಅರೆಸ್ಟ್ ವಂಚನೆಯ ಪ್ರಕರಣಗಳ ಬಗ್ಗೆ ಸಾಮಾಜಿಕ ಜಾಲತಾಣಗಳಾದ ಫೇಸ್‌ಬುಕ್, ವಾಟ್ಸ್‌ಆಪ್ ಹಾಗೂ ಟ್ವೀಟರ್ ಗಳ ಮೂಲಕ ಸೈಬರ್ ಜಾಗೃತಿಯ ಸಂದೇಶಗಳನ್ನು ರವಾನಿಸುವ ಮೂಲಕ ಸಾರ್ವಜನಿಕರಲ್ಲಿ ಜಾಗೃತಿ ನೀಡಲಾಗುತ್ತಿದೆ. |

| | | |
|---|---|---|
| | ಸಿದ್ಧಪಡಿಸಲು ಯಾವಾಗ ಕ್ರಮವಹಿಸಲಾಗುವುದು: | 2. ಶಾಲಾ ಕಾಲೇಜುಗಳಿಗೆ, ಇತರೆ ಸಂಸ್ಥೆಗಳಿಗೆ ಭೇಟಿ ನೀಡಿ ವಿದ್ಯಾರ್ಥಿ ಹಾಗೂ ಸಾರ್ವಜನಿಕರುಗಳಿಗೆ ಡಿಜಿಟಲ್ ಅರೆಸ್ಟ್ ವಂಚನೆಯ ಬಗ್ಗೆ ಜಾಗೃತಿ ಮೂಡಿಸಲು ಜಾಗೃತಾ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.<br><br>3. ಸಾರ್ವಜನಿಕರನ್ನು ಇಂತಹ ಅಪರಾಧಿಕ ಕೃತ್ಯಗಳ ಮೂಲಕ ವಂಚಿಸಲು ನಕಲಿ ಸಿಮ್‌ಕಾರ್ಡ್ ಹಾಗೂ ನಕಲಿ ಬ್ಯಾಂಕ್ ಖಾತೆಗಳನ್ನು ಮಾರಾಟಕ್ಕೆ ಬಳಸುವ ಸಾಮಾಜಿಕ ಜಾಲತಾಣಗಳಾದ ಫೇಸ್‌ಬುಕ್, ಟೆಲಿಗ್ರಾಂ, ಇತರೆ ಅಂತರ್ಜಾಲ ವೇದಿಕೆಗಳಲ್ಲಿ ಸಕ್ರಿಯವಾಗಿರುವ ಖಾತೆಗಳು ಹಾಗೂ ಗುಂಪುಗಳನ್ನು ಪತ್ತೆ ಹಚ್ಚಿ, 268 ಫೇಸ್‌ಬುಕ್ ಗುಂಪುಗಳು, 465 ಟೆಲಿಗ್ರಾಂ ಗುಂಪುಗಳು, 15 ಇನ್‌ಸ್ಟಾಗ್ರಾಂ ಖಾತೆಗಳು ಹಾಗೂ 61 ವಾಟ್ಸ್‌ಆಪ್ ಗುಂಪುಗಳನ್ನು ನಿಷ್ಕ್ರಿಯಗೊಳಿಸಲಾಗಿರುತ್ತದೆ.<br><br>4. ಸಿಐಡಿ ಕಛೇರಿಯ Centre for Cybercrime Investigation Training & Research (CCITR) ವಿಭಾಗದಲ್ಲಿ 2019 ಸಾಲಿನಿಂದ ಸರ್ಕಾರಿ ಸಂಸ್ಥೆಗಳಿಗೆ, ನ್ಯಾಯಾಧೀಶರುಗಳಿಗೆ, ಕಾನೂನು ಅಭಿಯೋಜಕರಿಗೆ, ಪೊಲೀಸ್ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿಯವರುಗಳಿಗೆ ಸೈಬರ್ ಅಪರಾಧಗಳನ್ನು ತನಿಖೆ ಮತ್ತು ಪತ್ತೆ ಮಾಡುವ ಬಗ್ಗೆ ಹಲವಾರು ತರಬೇತಿಗಳನ್ನು ಈಗಾಗಲೇ ನೀಡಲಾಗುತ್ತಿರುತ್ತದೆ. |
| ಈ) | ವಿವಿಧ ಸಂಕೀರ್ಣ ರೀತಿಯ ಕಾನೂನು ಬಾಹಿರ ಚಟುವಟಿಕೆಗಳನ್ನು ತಡೆಗಟ್ಟುವ ಬಗ್ಗೆ ಪ್ರಸ್ತುತ ಜಾರಿಯಲ್ಲಿರುವ ಹಳೆಯದಾಗಿರುವ ಕಾನೂನುಗಳನ್ನು ತಿದ್ದುಪಡಿ ಮಾಡಲು ಯಾವಾಗ ಕ್ರಮ ವಹಿಸಲಾಗುವುದು? | ಡಿಜಿಟಲ್ ಅರೆಸ್ಟ್ ಪ್ರಕರಣಗಳಿಗೆ ಸಂಬಂಧಿಸಿದಂತೆ ಮಾಹಿತಿ ತಂತ್ರಜ್ಞಾನ ಕಾಯ್ದೆ ಹಾಗೂ ಬಿಎನ್‌ಎಸ್ ಕಾಯ್ದೆಯಡಿ ಪ್ರಕರಣಗಳನ್ನು ದಾಖಲಿಸಲಾಗುತ್ತಿದೆ. |

ಸಂಖ್ಯೆ: ಹೆಚ್‌ಡಿ 82 ಪಿಸಿಕ್ಯೂ 2024

**(ಡಾ: ಜಿ. ಪರಮೇಶ್ವರ)**
ಗೃಹ ಸಚಿವರು